6. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

1. ವಿಷಯ: ಅರಣ್ಯ ಜಮೀನಿನಲ್ಲಿ 1978ಕ್ಕಿಂತ ಹಿಂದಿನಿಂದ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ಬಗ್ಗೆ.

ಶ್ರೀ ಈ. ತುಕಾರಾಂ (ಸಂಡೂರು):– ಮಾನ್ಯ ಅಧ್ಯಕ್ಷರೆ, ಅರಣ್ಯ ಜಮೀನಿನಲ್ಲಿ 1978ಕ್ಕಿಂತ ಹಿಂದಿನಿಂದಲೂ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವವರನ್ನು ಅರಣ್ಯ ಒತ್ತುವರಿ ಮಾಡಿದ್ದಾರೆಂದು ಹೇಳಿ ಅವರನ್ನು ಅಲ್ಲಿಂದ ಒಕ್ಕಲೆಬ್ಬಿಸುತ್ತಿರುವ ಬಗ್ಗೆ ಪ್ರಸ್ತಾಪ ಮಾಡಬೇಕೆಂದಿದ್ದೆ. ಅದರ ಬಗ್ಗೆ ಇತ್ತೀಚೆಗೆ ಸರ್ಕಾರದವರು ಒಂದು ಸುತ್ತೋಲೆ ಹೊರಡಿಸಿದ್ದಾರೆ. ಅದನ್ನು ನಾವು ರೈತರಿಗೆಲ್ಲ ತಿಳಿಸಿದ್ದೇವೆ. ಈಗ ಸದ್ಯಕ್ಕೆ ಒಕ್ಕಲೆಬ್ಬಿಸುವುದನ್ನು ನಿಲ್ಲಿಸಿದ್ದಾರೆ. ಅದಕ್ಕೆ ನಾನು ಅರಣ್ಯ ಸಚಿವರಿಗೆ ಅಭಿನಂದನೆ ಸಲ್ಲಿಸುತ್ತೇನೆ.

ಶ್ರೀ ಬಿ. ರಮಾನಾಥ ರೈ (ಮಾನ್ಯ ಅರಣ್ಯ ಸಚಿವರು):– ಮಾನ್ಯ ಅಧ್ಯಕ್ಷರೆ, ಕಾನೂನು ಸಚಿವರು ಈ ಬಗ್ಗೆ ಸದನದಲ್ಲಿ ಈಗಾಗಲೇ ಉತ್ತರವನ್ನು ಕೊಟ್ಟಿದ್ದಾರೆ. ಈಗೇನೂ ಸಮಸ್ಯೆಯಿಲ್ಲ.

ಅಧ್ಯಕ್ಷರು:– ಆಯಿತು.

2. ವಿಷಯ: ಇಳಕಲ್ ನಗರದಲ್ಲಿ ನಿರ್ಮಾಣವಾಗಿರುವ ಪೊಲೀಸ್ ಠಾಣೆ ಕಟ್ಟಡದ ಉದ್ಘಾಟನೆಯನ್ನು ಮುಂದೂಡುವ ಬಗ್ಗೆ.

ಶ್ರೀ ಕಾಶಪ್ಪನವರ್ ವಿಜಯಾನಂದ ಶಿವಶಂಕರಪ್ಪ (ಹುನಗುಂದ):– ಮಾನ್ಯ ಅಧ್ಯಕ್ಷರೆ, ತಮ್ಮ ಮೂಲಕ ಮಾನ್ಯ ಗೃಹ ಸಚಿವರ ಗಮನಕ್ಕೆ ಈ ವಿಷಯವನ್ನು ತರಲು ಬಯಸುತ್ತಿದ್ದೇನೆ. ಹುನಗುಂದ ತಾಲ್ಲೂಕಿನ ಇಳಕಲ್ ನಗರದಲ್ಲಿ ನೂತನವಾಗಿ ಪೊಲೀಸ್ ಠಾಣೆ ಕಟ್ಟಡ ನಿರ್ಮಾಣವಾಗಿದೆ. ಅದನ್ನು ಉದ್ಘಾಟನೆ ಮಾಡಬೇಕೆಂದು ಅಧಿಕಾರಿಗಳು ತರಾತುರಿಯಲ್ಲಿದ್ದಾರೆ. ಆದರೆ ಅದರಲ್ಲಿ ಕಳಪೆ ಗುಣಮಟ್ಟದ ಕಾಮಗಾರಿಯಾಗಿದ್ದು, ಅದು ಸಂಪೂರ್ಣವಾಗುವವರೆಗೂ ಉದ್ಘಾಟನೆಯಾಗುವುದು ಬೇಡ ಎನ್ನುವುದು ನನ್ನ ವಿನಂತಿಯಾಗಿದೆ.

ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು):– ಸನ್ಮಾನ್ಯ ಸಭಾಧ್ಯಕ್ಷರೆ, ಉತ್ತರವನ್ನು ತರಿಸಿಕೊಡುತ್ತೇವೆ.

ಅಧ್ಯಕ್ಷರು:– ಆಯಿತು.

3. ವಿಷಯ: ತುರುವೇಕೆರೆ ತಾಲ್ಲೂಕನ್ನು ಪ್ರವಾಸಿ ತಾಣವನ್ನಾಗಿ ಮಾಡುವ ಬಗ್ಗೆ.

ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ):– ಮಾನ್ಯ ಅಧ್ಯಕ್ಷರೆ, ತುರುವೇಕೆರೆಯಲ್ಲಿ ಯಾವಾಗಲೂ ಹೇಮಾವತಿ ನದಿ ನೀರು ಹರಿಯುತ್ತಿರುತ್ತದೆ. ಆದ್ದರಿಂದ ಅದನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಬೇಕೆಂದು ಕಳೆದ ಎರಡು ಬಾರಿಯಿಂದಲೂ ಕೇಳುತ್ತಿದ್ದೇನೆ. ಮಾಡಿಕೊಡುತ್ತೇವೆ ಎಂದು ಮಾನ್ಯ ಸಚಿವರು ಭರವಸೆ ಕೊಟ್ಟಿದ್ದಾರೆ. ಅದು ಕಾರ್ಯಗತವಾಗಬೇಕು. ಅದಕ್ಕೆ ಎಸ್ಟಿಮೇಟ್ ಮಾಡಿ ಸುಮಾರು ಎಂಟು ಕೋಟಿ ರೂಪಾಯಿಗಳಷ್ಟು ಹಣವನ್ನು ಇಟ್ಟಿದ್ದಾರೆ. ಅದು ಏನಾಗಿದೆ ಎಂದು ನನಗೆ ಮಾಹಿತಿ ಬೇಕು.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು):– ಇದಕ್ಕೆ ಈಗ ಉತ್ತರ ಇಲ್ಲ. ಮಾನ್ಯ ಸಚಿವರಿಂದ ಉತ್ತರ ಕೊಡಿಸುತ್ತೇವೆ.

ಅಧ್ಯಕ್ಷರು:– ಆಯಿತು, ನಾಳೆ ಉತ್ತರ ತರಿಸಿ ಕೊಡುತ್ತಾರೆ.

4. ವಿಷಯ: ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬಯೋ ಗ್ಯಾಸ್ ಘಟಕ ಸ್ಥಾಪಿಸುವ ಬಗ್ಗೆ.

ಶ್ರೀ ಬಿ.ಎನ್. ವಿಜಯಕುಮಾರ್ (ಜಯನಗರ):– ಮಾನ್ಯ ಅಧ್ಯಕ್ಷರೆ, ಬೆಂಗಳೂರಿನಲ್ಲಿ ಕಸ ವಿಲೇವಾರಿಯದು ಎಷ್ಟು ದೊಡ್ಡ ಸಮಸ್ಯೆ ಎನ್ನುವುದು ಗೊತ್ತಿದೆ. ಅದಕ್ಕೆ ಬಯೋ ಗ್ಯಾಸ್ ಪ್ಲಾಂಟನ್ನು ಮಾಡುತ್ತೇವೆ ಎಂದು ಕಳೆದ ಎರಡು ವರ್ಷಗಳಿಂದಲೂ ಮಾಡುತ್ತಲೇ ಇದ್ದಾರೆ. ಹನ್ನೆರಡು ಪ್ಲಾಂಟ್‌ಗಳಲ್ಲಿ ಹತ್ತು ಇನ್‌ಸ್ಟಾಲ್ ಆಗಿವೆ. ಸುಮಾರು ಮುಕ್ಕಾಲು ಪಾಲು ಹಣವನ್ನು